1169 Sri Dinesh Gundurao : Hon'ble Minister for Animal Husbandry kindly answer to the below question?

a) Whether the Government intends to re-organize the Veterinary Department?

b) Since how many days the re-organization proposal is pending with the Government?

c) As a first step towards re-organization the post of Commissioner and Additional Directors were sanctioned? What is the reason for not taking any action to complete Re-organization?

d) Due to negligence of the officers the re-organization is not completed, will it not affect the basic purpose of Re-organization? What is the action taken by the Fovernment against easing officer?

e) When the re-organization will be completed?

Sri Revunaik Belamagi (Minister for Animal Husbadry) :

a) Yes.

b) With regard to Re-organization the complete revised proposal has been called from Department and waiting for the same.

c) During the year 2004 Divisional Officers were abolished. Later on during the year 2005, 825 vacant posts were identified as a part of 80% of the vacant posts which were to be abolished. The posts, which were identified were to be altered and in additional new Institution were created. In view of all these Changes a complete revised Re-organization proposal of the Depertment has to be prepared.

d) Detailed Re-organization proposal was submitted to Government during 2004, but due to the objections raised from different Cadre level Associations, this proposal was held up in the Department for reconsideration. The Department is examining the re-organization proposal without giving much financial burden on the Government. Hence, none of the officers are responsible for delay.

e) As soon as the complete Re-organization proposal is received, action will be taken to Re-organize the Depertment.

658 ಶ್ರೀ ಸುರೇಶ್‌ಗೌಡ (ನಾಗಮಂಗಲ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾಗಮಂಗಲ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿವೆ: ಈ ಕಾಲೇಜುಗಳ ಪೈಕಿ ಎಷ್ಟು ಕಾಲೇಜುಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

ಆ) ಹಾಗಿದ್ದಲ್ಲಿ, ಕಾಲೇಜುಗಳಿಗೆ ಮಂಜೂರಾದ ಹುದ್ದೆಗಳು ಎಷ್ಟು, ಈ ಹುದ್ದೆಗಳಲ್ಲಿ ಎಷ್ಟು ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಎಷ್ಟು ಹುದ್ದೆಗಳು ಖಾಲಿ ಇವೆ;

ಇ) ಸ್ವಂತ ಕಟ್ಟಡ ಇಲ್ಲದೇ ಇರುವ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಉಪನ್ಯಾಸಕರು ಇಲ್ಲದೇ ಇರುವ ಕಾಲೇಜುಗಳ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ನಾಗಮಂಗಲ ತಾಲ್ಲೂಕಿನಲ್ಲಿ ಒಟ್ಟು 11 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿವೆ. ಇವುಗಳ ಪೈಕಿ 8 ಕಾಲೇಜುಗಳಿಗೆ ಸ್ವಂತ ಕಟ್ಟಡ ಇರುತ್ತವೆ. 3 ಕಾಲೇಜುಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ.

ಆ) 1. ಮಂಜೂರಾದ ಹುದ್ದೆಗಳ ಸಂಖ್ಯೆ : 83

2. ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ : 42

3. ಖಾಲಿ ಇರುವ ಹುದ್ದೆಗಳ ಸಂಖ್ಯೆ : 41.

ಇ) ಸ್ವಂತ ಕಟ್ಟಡ ಹೊಂದಿಲ್ಲದೇ ಇರುವ ಸರ್ಕಾರಿ ಪದವಿ ಪೂರ್ವ ಕಾಲೇಜು, ಬೋಗಾದಿ, ಸರ್ಕಾರಿ ಪದವಿ ಪೂರ್ವ ಕಾಲೇಜು, ಹರದನಹಳ್ಳಿ ಮತ್ತು ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು, ನಾಗಮಂಗಲ. ಇವುಗಳ ಪೈಕಿ ಬೋಗಾದಿ, ಮತ್ತು ಹರದನಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಕಟ್ಟಡ ಕಾಮಗಾರಿ ಈಗಾಗಲೇ ಪ್ರಾರಂಭವಾಗಿವೆ, ನಾಗಮಂಗಲ ಬಾಲಕಿಯರ ಪದವಿ ಪೂರ್ವ ಕಾಲೇಜಿಗೆ ನಿವೇಶನದ ಕೊರತೆ ಇರುವುದರಿಂದ ಇನ್ನೂ ಕಾಮಗಾರಿಯನ್ನು ಪ್ರಾರಂಭಿಸಿರುವುದಿಲ್ಲ. ನಿವೇಶನ ದೊರೆತ ಕೂಡಲೇ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಈ)

- ನೇರ ನೇಮಕಾತಿಗೆ ಲಭ್ಯವಿರುವ 2578 ಉಪನ್ಯಾಸಕರ ಹುದ್ದೆಗಳಿಗೆ ಅಭ್ಯರ್ಥಿಗಳ ಆಯ್ಕೆಗೆ ದಿನಾಂಕ: 14–03–2008 ರಂದು ಕರ್ನಾಟಕ ಲೋಕಸೇವಾ ಆಯೋಗವನ್ನು ಕೋರಲಾಗಿದ್ದು, ಆಯೋಗದಿಂದ 2578 ಉಪನ್ಯಾಸಕರ ನೇರ ನೇಮಕಾತಿಗೆ ಅಂತಿಮ ಆಯ್ಕೆ ಪಟ್ಟಿ ಬಂದಿದ್ದು, ಅಭ್ಯರ್ಥಿಗಳ ಸಿಂಧುತ್ವ, ವೈದ್ಯಕೀಯ ಮತ್ತು ಪೊಲೀಸ್

ವರದಿ ನೀಡುವಂತೆ ಸಂಬಂಧಪಟ್ಟ ಪ್ರಾಧಿಕಾರಿಗಳಿಗೆ ದಿನಾಂಕ: 29–06–2009ರಂದು ಕೋರಲಾಗಿದೆ. ಸದರಿ ಅಭ್ಯರ್ಥಿಗಳನ್ನು ಕೌನ್ಸೆಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸ ಲಾಗುವುದು.

- ಸ್ನಾತಕೋತ್ತರ ಪದವಿ ಪಡೆದ ಅರ್ಹ ಪ್ರೌಢಶಾಲಾ ಶಿಕ್ಷಕರುಗಳ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಲಾಗಿದೆ. ಆಕ್ಷೇಪಣೆಗಳನ್ನು ಸಲ್ಲಿಸಲು ಶಿಕ್ಷಕರಿಗೆ ದಿನಾಂಕ: 17–07–2009ರಂದು ನಿಗದಿ ಪಡಿಸಲಾಗಿದೆ. ಕೊನೆಯ ದಿನಾಂಕದವರೆಗೆ ಬಂದ ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮ ಪಟ್ಟಿಯನ್ನು ಪ್ರಕಟಿಸಿ ಬಡ್ತಿ ನೀಡಲು ಕ್ರಮ ಜರುಗಿಸಲಾಗುವುದು.
- ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಸ್ನಾತಕೋತ್ತರ ಪದವಿ ಪಡೆದ ಪದವೀಧರರನ್ನು ಅಥಿತಿ ಉಪನ್ಯಾಸಕರಾಗಿ ನೇಮಕ ಮಾಡಿಕೊಳ್ಳಲು ಪ್ರಾಚಾರ್ಯರಿಗೆ ಅನುಮತಿ ನೀಡಿದೆ.

28 ಶ್ರೀ ಪಾಟೀಲ್ ಎ.ಎಸ್ (ನಡಹಳ್ಳಿ) (ದೇವರ ಹಿಪ್ಪರಗಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯು ಬಿಜಾಪೂರ ಜಿಲ್ಲೆಯ ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ಅನುಷ್ಠಾನಗೊಂಡಿವೆ (ವಿಧಾನಸಭಾ ಕ್ಷೇತ್ರ, ಗ್ರಾಮ ಪಂಚಾಯತ್ ಹೆಸರುಗಳನ್ನೊಳಗೊಂಡ ವಿವರ ನೀಡುವುದು);

ಆ) ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ;

ಇ) ದೇವರ ಹಿಪ್ಪರಗಿ ಕ್ಷೇತ್ರ ವ್ಯಾಪ್ತಿಯಲ್ಲಿ ಇಲ್ಲಿಯವರೆಗೆ ಯಾವ ಯಾವ ಗ್ರಾಮ ಪಂಚಾಯತ್‌ಗಳಿಂದ ಯಾವ ಯಾವ ಗ್ರಾಮದ ಜನರು ಸದುಪಯೋಗ ಪಡೆದುಕೊಂಡಿದ್ದಾರೆ (ಕಾಮಗಾರಿ ವಿವರ ನೀಡುವುದು);

ಈ) ಬಿಜಾಪೂರ ಜಿಲ್ಲೆಯಲ್ಲಿ ಇದೂವರೆಗೂ ಸದರಿ ಯೋಜನೆ ಅಡಿಯಲ್ಲಿ ಬಾಕಿ ಉಳಿದ ಮತ್ತು ಖರ್ಚಾದ ಹಣವೆಷ್ಟು (ಕ್ಷೇತ್ರವಾರು ವಿವರ ನೀಡುವುದು);